ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಕೊಡಗು ಜಿಲ್ಲೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ತುಂಬುವ ಬಗ್ಗೆ

ಶ್ರೀ ಎಂ. ಪಿ. ಸುನೀಲ್ ಸುಬ್ರಮಣಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

477 (487) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೊಡಗು ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಕಳೆದ ಸುಮಾರು ವರ್ಷಗಳಿಂದ ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಹುದ್ದೆಗಳು ಖಾಲಿ ಇರಲು ಕಾರಣಗಳೇನು; (ವಿವರ ನೀಡುವುದು)

(ಇ) ಇಲಾಖೆಯಲ್ಲಿ ಸುಮಾರು 80% ಹುದ್ದೆಗಳು ಖಾಲಿ ಇದ್ದರೂ ಇಲ್ಲಿಗೆ ಸಿಬ್ಬಂದಿಗಳನ್ನು ವರ್ಗಾಯಿಸಿಲ್ಲವೇಕೆ; (ಮಾಹಿತಿ ನೀಡುವುದು)

(ಈ) ಈ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ತುಂಬಲಾಗುವುದು? (ಮಾಹಿತಿ ನೀಡುವುದು)